**ಎಂ.ವಿ.ಸಿಃ 340/2023** **ಪಿಡಬ್ಲೂ–1 ಮಹೇಶ**

ದಿನಾಂಕಃ 10.07.2024 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

ಪಾಟೀ ಸವಾಲುಃ 2ನೇ ಎದುರುದಾರರ ಪರ ಶ್ರೀ ಎಂ.ಎಸ್.ವಿ. ವಕೀಲರಿಂದಃ

ಅಪಘಾತವು ನನ್ನ ಮಗನ ತಪ್ಪಿನಿಂದ ಆಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತವನ್ನು ನಾನು ಕಣ್ಣಾರೆ ನೋಡಿಲ್ಲ ಎಂದರೆ ಸರಿ. ಅಪಘಾತದ ಬಗ್ಗೆ ನನಗೆ ಸಂಪೂರ್ಣ ಮಾಹಿತಿ ಇಲ್ಲದೇ ಇದ್ದರೂ ಸಹ ನ್ಯಾಯಾಲಯದಲ್ಲಿ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ದಿನದಂದು ನನ್ನ ಮಗ ಆಟ ಆಡಲು ಮೈದಾನಕ್ಕೆ ಹೋಗಿದ್ದ ಎಂದರೆ ಸರಿಯಲ್ಲ. ನನ್ನ ಮಗನನ್ನು ಅಂಗಡಿಗೆ ಬೇಳೆ ತರಲು ಕಳುಹಿಸಿದ್ದೆ. ನನ್ನ ಮಗ ವಾಹವನ್ನು ಗಮನಿಸದೆ ರಸ್ತೆಯಲ್ಲಿ ಅಡ್ಡವಾಗಿ ಸೈಕಲ್ ಅನ್ನು ತಂದಿದ್ದರಿಂದ ಅಪಘಾತ ಆಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತವು ದ್ವಿಚಕ್ರ ವಾಹನದ ಸವಾರನ ತಪ್ಪಿನಿಂದ ಆಗಿಲ್ಲ ಎಂದರೆ ಸರಿಯಲ್ಲ. ಅಪಘಾತದಲ್ಲಿ ನನ್ನ ಮಗನಿಗೆ 4 ಹಲ್ಲು ಮುರಿದು ಗಡ್ಡಕ್ಕೆ ಗಾಯವಾಗಿರುತ್ತದೆ. ನನ್ನ ಮಗ ಸ್ವತಃ ಸೈಕಲ್ ನಿಂದ ಬಿದ್ದು ಗಾಯಗೊಂಡಿರುತ್ತಾನೆ ಎಂದರೆ ಸರಿಯಲ್ಲ. ಗಾಯದ ಪ್ರಮಾಣ ಪತ್ರದಲ್ಲಿ ನನ್ನ ಮಗನಿಗೆ 3 ಹಲ್ಲು ಮುರಿದಿದೆ ಎಂದು ವೈದ್ಯರು ನಮೂದಿಸಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಮಗ ಈಗ ಸಂಪೂರ್ಣವಾಗಿ ಗುಣಮುಖನಾಗಿದ್ದಾನೆ ಎಂದರೆ ಸರಿಯಲ್ಲ. ದಿನಾಂಕಃ 30.06.2024 ರಂದು ನನ್ನ ಮಗನನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತೇನೆ. ಈ ಬಗ್ಗೆ ವೈದ್ಯಕೀಯ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ನನ್ನ ಮಗ ಈಗ ಸಂಪೂರ್ಣವಾಗಿ ಗುಣಮುಖನಾಗಿರುವುದರಿಂದ ಆತನನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿಲ್ಲ ಎಂದರೆ ಸರಿಯಲ್ಲ.

ನನ್ನ ಮಗನಿಗೆ ಅಪಘಾತ ಆದಗ ಆತನಿಗೆ 10 ವರ್ಷ ವಯಸ್ಸಾಗಿತ್ತು. ನನ್ನ ಮಗ ಈಗ 5ನೇ ತರಗತಿಯಲ್ಲಿ ಓದುತ್ತಿದ್ದಾನೆ. ನನ್ನ ಮಗ ತಿಂಗಳಿಗೆ 15,000/–ರೂಪಾಯಿ ಸಂಪಾದನೆ ಮಾಡುತ್ತಿದ್ದ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮಗನಿಗೆ ತಿಂಗಳಿಗೆ 15,000/–ರೂಪಾಯಿ ಸಂಪಾದನೆ ಮಾಡುವಷ್ಟು

**ಎಂ.ವಿ.ಸಿಃ 340/2023** **ಪಿಡಬ್ಲೂ-1 ಮಹೇಶ**

ಸಾರ್ಮರ್ಥ್ಯ ಇಲ್ಲ ಎಂದರೆ ಸರಿಯಲ್ಲ. ನನ್ನ ಮಗನ ಆಸ್ಪತ್ರೆ ಖರ್ಚಿಗಾಗಿ ರೂ.2,00,000/- ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ದ್ವಿಚಕ್ರ ವಾಹನದ insured ರವರನ್ನು ಪಕ್ಷಕಾರರನ್ನಾಗಿ ಮಾಡಿಲ್ಲ ಎಂದರೆ ನನಗೆ ಗೊತ್ತಿಲ್ಲ. ಅಪಘಾತವು ನನ್ನ ಮಗನ ತಪ್ಪಿನಿಂದ ಆಗಿರುವುದರಿಂದ 2ನೇ ಎದುರುದಾರರು ಪರಿಹಾರದ ಹಣ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** 1ನೇ ಎದುರುದಾರರ ಪರ ವಕೀಲರು ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಾಮರಾಜನಗರ.